# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 50 (621) |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 11.12.2025 |
| ಉತ್ತರಿಸಬೇಕಾದವರು | : | ಸನ್ಮಾನ್ಯ ಮುಖ್ಯ ಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯ ಕೇಂದ್ರ ಬಿಂದುವಾದ ಯಲ್ಲಾಪುರ ತಾಲ್ಲೂಕಿನ ಯಲ್ಲಾಪುರ ಪಟ್ಟಣದ ಸುತ್ತಮುತ್ತಲಿನ ದೂರದ ಹಳ್ಳಿಗಳಿಂದ ಬುಡಕಟ್ಟು ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಪ್ರತಿನಿತ್ಯ ಕಾಲೇಜುಗಳಿಗೆ ಬರುತ್ತಿದ್ದು, ಸರಿಯಾದ ಸಮಯಕ್ಕೆ ಹಾಜರಾಗಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಯಲ್ಲಾಪುರದಲ್ಲಿ ಕಾಲೇಜು ವಿದ್ಯಾರ್ಥಿಗಳ ವಸತಿ ನಿಲಯ ಪ್ರಾರಂಭಿಸುವ ಯೋಚನೆ ಸರ್ಕಾರಕ್ಕೆ ಇದೆಯೇ; | ಉತ್ತರಕನ್ನಡ ಜಿಲ್ಲೆ, ಯಲ್ಲಾಪುರ ಪಟ್ಟಣಕ್ಕೆ ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಮಂಜೂರಾತಿ ಕೋರಿ, ಜಿಲ್ಲೆಯಿಂದ ಸೂಕ್ತ ಪ್ರಸ್ತಾವನೆ ಸ್ವೀಕೃತವಾದಲ್ಲಿ, ಅವಶ್ಯಕತೆಗೆ ಅನುಗುಣವಾಗಿ ವಿದ್ಯಾರ್ಥಿ ನಿಲಯವನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು. |
| ಆ) | ಮೆಟ್ರಿಕ್ ನಂತರದ ವಸತಿ ನಿಲಯ ಪ್ರಾರಂಭಿಸಲು ಇರುವ ಮಾನದಂಡಗಳು ಯಾವುವು; ಅತ್ಯಾವಶ್ಯಕವಾಗಿ ಬೇಕಾಗಿರುವ ವಸತಿ ನಿಲಯದ ಕುರಿತು ಸರ್ಕಾರದ ನಿಲುವು ಏನು? | ಮೆಟ್ರಿಕ್ ನಂತರದ ವಸತಿ ನಿಲಯಗಳನ್ನು ಯಾವುದೇ ಒಂದು ಸ್ಥಳದಲ್ಲಿ ಪ್ರಾರಂಭಿಸಲು ಸುತ್ತಮುತ್ತಲಿನ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಸಂಖ್ಯೆ ಮತ್ತು ಅವರಿಂದ ವಸತಿ ನಿಲಯ ಪ್ರವೇಶಾತಿಗೆ ಬೇಡಿಕೆಯು ಪ್ರಮುಖ ಮಾನದಂಡಗಳಾಗಿರುತ್ತವೆ.<br><br>ಜಿಲ್ಲೆಗಳಿಂದ ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ನಿಲಯಗಳ ಮಂಜೂರಾತಿ ಕುರಿತು ಸೂಕ್ತ ಪ್ರಸ್ತಾವನೆ ಸ್ವೀಕೃತವಾದಲ್ಲಿ ಮತ್ತು ಅತ್ಯಾವಶ್ಯಕ ಎಂದು ಕಂಡುಬಂದಲ್ಲಿ, ಆದ್ಯತೆಯ ಮೇರೆಗೆ ಪರಿಶೀಲಿಸಿ, ಅನುದಾನದ ಲಭ್ಯತೆಗೆ ಅನುಸಾರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಪರಿಶೀಲಿಸಲಾಗುವುದು.<br><br>2024-25 ಮತ್ತು 2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅತ್ಯಾವಶ್ಯಕವಾಗಿ ಬೇಕಾಗಿರುವ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಒಟ್ಟು 34 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿದ್ದು, ಈ ಪೈಕಿ ಉತ್ತರಕನ್ನಡ ಜಿಲ್ಲೆಯ ಜಿಲ್ಲಾ ಕೇಂದ್ರದಲ್ಲಿ 02 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿರುತ್ತದೆ. |

STW/SECB/STP/441/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ